

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಚುನಾವಣೆ ಹಿನ್ನೆಲೆ ನಗರದ ಲ್ಯಾಮಿಂಗ್ಟನ್ ಬಾಲಕರ ಪ್ರೌಢಶಾಲೆಯಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮತ ಚಲಾಯಿಸಿದರು.

04.09.2021

ಸಂಯುಕ್ತ ಕರ್ನಾಟಕ Sat
epa



ಧಾರವಾಡದಲ್ಲಿ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದಿಂದ ವರ್ಚುವಲ್ ಮೂಲಕ ರಾಷ್ಟ್ರೀಯ ಕ್ರೀಡಾ ದಿನವನ್ನು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

# ದೈಹಿಕ ಶಿಕ್ಷಣದಿಂದ ಸರ್ವತೋಮುಖ ಅಭಿವೃದ್ಧಿ

ಧಾರವಾಡ : ದೈಹಿಕ ಶಿಕ್ಷಣ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು. ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದಿಂದ ವರ್ಚುವಲ್ ಮೂಲಕ ರಾಷ್ಟ್ರೀಯ ಕ್ರೀಡಾ ದಿನ ಉದ್ಘಾಟಿಸಿ ಮಾತನಾಡಿ, ದೈಹಿಕ ಶಿಕ್ಷಣ ಎಲ್ಲಾ ವಿದ್ಯಾರ್ಥಿಗಳಿಗೆ ಅತ್ಯುತ್ತಮವಾಗಿ ಮತ್ತು ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕಾದರೆ ದೈಹಿಕ ಶಿಕ್ಷಣ ಶಿಕ್ಷಕರ ಎಲ್ಲಾ ಬೇಡಿಕೆಗಳು ಈಡೇರಬೇಕಾಗುತ್ತದೆ ಎಂದರು.

ನೂತನ ರಾಷ್ಟ್ರೀಯ ಶಿಕ್ಷಣ ನೀತಿಯ ಸದಸ್ಯ ಅರುಣ ಶಹಪೂರ ಮಾತನಾಡಿ, ದೈಹಿಕ ಶಿಕ್ಷಣ ಮತ್ತು ಕ್ರೀಡೆ ಎಂಬುದು ಒಂದೇ ಆಗಿದೆ. ಇಂದು ಕೇಂದ್ರ ಮತ್ತು ರಾಜ್ಯ ಸರಕಾರ ಕ್ರೀಡೆಗೆ ಹೆಚ್ಚಿನ ಒತ್ತು ನೀಡಿದ್ದು, ಪ್ರಶಸ್ತಿಯಲ್ಲಿ ಮತ್ತು ಪ್ರಶಸ್ತಿಯಲ್ಲಿನ ಮೊತ್ತದಲ್ಲೂ ಬದಲಾವಣೆಯಾಗಿದೆ. ಒಟ್ಟಿನಲ್ಲಿ ದೈಹಿಕ ಶಿಕ್ಷಣದಲ್ಲಿ ಹೆಚ್ಚಿನ ಬದಲಾವಣೆ ಆಗುತ್ತಿರುವುದು ಉತ್ತಮ ಬೆಳವಣಿಗೆ ಎಂದರು.

ಮಂಗಳೂರು ವಿವಿ ಕುಲಸಚಿವ ಪ್ರೊ. ಕಿಶೋರ್ ಕುಮಾರ್ ಸಿ.ಕೆ. ಮಾತನಾಡಿ, ದೈಹಿಕ ಶಿಕ್ಷಣ ಶಿಕ್ಷಕರು ಇಂದು ಕೇವಲ ದೈಹಿಕ ಶಿಕ್ಷಣದಲ್ಲಿ ಮಾತ್ರವಲ್ಲದೆ ಮಾನವೀಯ ದೃಷ್ಟಿಯಲ್ಲಿ ಕೋವಿಡ್ ಸಂದರ್ಭದಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ್ದು, ಇದನ್ನು ಶಿಕ್ಷಣ ಇಲಾಖೆ ಗುರುತಿಸಿ ಗೌರವಿಸಿದನ್ನು ನಾವು ಸ್ಮರಿಸಬಹುದಾಗಿದೆ ಎಂದರು. ಗುರುರಾಜ ಪೂಜಾರಿ, ಡಾ. ಸಕ್ಪಾಲ್ ಹೂವಣ್ಣ, ಅರುಣ ಜೋಶಿ, ಡಿಡಿಪಿಐ ಎಂ.ಎಲ್. ಹಂಚಾಟೆ, ಬಿಇಓ ಗಿರೀಶ್ ಪದಕಿ, ಶ್ಯಾಮ ಮಲ್ಲನಗೌಡರ ಇದ್ದರು. ಅಧ್ಯಕ್ಷತೆ ವಹಿಸಿದ್ದ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷ ಚೌಡಪ್ಪ ಎಸ್ ಮಾತನಾಡಿದರು. ಪ್ರಮೋದ್ ರೋಣದ ಪರಿಚಯಿಸಿದರು. ಲಿಲ್ಲಿ ಪಾಯ್ಸ್ ನಿರೂಪಿಸಿದರು. ಕೆ.ಜಿ. ಚಂದ್ರಶೇಖರ್ ಸ್ವಾಗತಿಸಿದರು. ಕೌಸಲ್ಯ ರಾಣಿ ಪ್ರಾರ್ಥಿಸಿದರು.

ಸಂಯುಕ್ತ ಕರ್ನಾಟಕ Sat, 04 September 2021
epaper.samyukthakarnataka